# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1629

2) ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 18-03-2026

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮೀನುಗಾರಿಕೆ ವೃತ್ತಿಯಲ್ಲಿ ಕೈಗೊಂಡಿರುವ ಫಲಾನುಭವಿಗಳಿಗೆ ಸರ್ಕಾರ ನೀಡುತ್ತಿರುವ ಯೋಜನೆಗಳು ಯಾವುವು; ಈ ಯೋಜನೆಗಳಿಗೆ ನಿಗದಿಪಡಿಸಿರುವ ವೆಚ್ಚ ಎಷ್ಟು; | ಮೀನುಗಾರಿಕೆ ವೃತ್ತಿಯಲ್ಲಿ ತೊಡಗಿರುವ ಮೀನುಗಾರರಿಗೆ ಸರ್ಕಾರ ನೀಡುತ್ತಿರುವ ಯೋಜನೆಗಳ ವಿವರ ಹಾಗೂ ನಿಗದಿಪಡಿಸಿರುವ ಘಟಕ ವೆಚ್ಚದ ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಆ) | ಕರಾವಳಿ ಪ್ರದೇಶದಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ನೀಡುತ್ತಿರುವ ರಕ್ಷಣಾ ಯೋಜನೆಗಳು ಯಾವುವು; ಇದರಿಂದ ಪ್ರಯೋಜನ ಪಡೆದಿರುವ ಮೀನುಗಾರರ ಸಂಖ್ಯೆ ಎಷ್ಟು; | ಕರಾವಳಿ ಪ್ರದೇಶದಲ್ಲಿ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಫಲಾನುಭವಿಯೇತರ ಕಾರ್ಯಕ್ರಮದಡಿ ದ್ವಿಮುಖ ಸಂವಹನ ಸಾಧನಗಳನ್ನು ಯಾಂತ್ರಿಕೃತ ಮತ್ತು ಮೋಟಾರೀಕೃತ ದೋಣಿಗಳಿಗೆ ಅಳವಡಿಸಲಾಗುತ್ತಿದೆ. ಇದರಿಂದ ಮೀನುಗಾರರಿಗೆ ತುರ್ತು ಸಂದರ್ಭದಲ್ಲಿ ಮತ್ತು ಹವಾಮಾನ ವೈಪರೀತ್ಯಗಳ ಸಂದೇಶಗಳನ್ನು ಮುನ್ನೆಚ್ಚರಿಕೆ ಕ್ರಮವಾಗಿ ರವಾನಿಸಬಹುದಾಗಿದೆ. ಅಲ್ಲದೆ, ಇದರಿಂದ ಮೀನುಗಾರರು ಆಪತ್ತಿನ ಸಮಯದಲ್ಲಿ / ತುರ್ತು ಸಂದರ್ಭದಲ್ಲಿ ಸಹಾಯಕ್ಕಾಗಿ ಸಂಬಂಧಿಸಿದ ಇಲಾಖೆಗಳನ್ನು ಸಂಪರ್ಕಿಸಬಹುದಾಗಿದೆ. ಇದರಿಂದ ಆಪತ್ತಿನಲ್ಲಿರುವ ಮೀನುಗಾರರನ್ನು ರಕ್ಷಿಸಲು ಅಗತ್ಯ ಕ್ರಮವಹಿಸಲು ಸಹಾಯಕವಾಗುತ್ತಿದೆ. ಪ್ರಸ್ತುತ ಮೂರು ಕರಾವಳಿ ಜಿಲ್ಲೆಯಲ್ಲಿ 3789 ಯಾಂತ್ರೀಕೃತ ದೋಣಿಗಳಿಗೆ ಮತ್ತು 3095 ಮೋಟಾರೀಕೃತ ದೋಣಿಗಳಿಗೆ ದ್ವಿಮುಖ ಸಂವಹನ ಸಾಧನಗಳನ್ನು ಅಳವಡಿಸಲಾಗಿದೆ.<br><br>ಇದಲ್ಲದೆ, ಮೀನುಗಾರರಿಗೆ ಜೀವರಕ್ಷಕ ಸಾಧನಗಳಾದ ಲೈಫ್‌ಜಾಕೆಟ್ ಮತ್ತು ಲೈಫ್‌ಬಾಯ್‌ಗಳನ್ನು ವಿತರಿಸಲಾಗುತ್ತಿದೆ. ಮೂರು ಕರಾವಳಿ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ 1231 ಮೀನುಗಾರರಿಗೆ ಜೀವರಕ್ಷಕ ಸಾಧನಗಳನ್ನು ವಿತರಿಸಲಾಗಿದೆ. |

| | | |
|---|---|---|
| ಇ) | ಸಮುದ್ರಗಳಲ್ಲಿ ಮೀನುಗಾರಿಕೆ ಮಾಡುವ ಮೀನುಗಾರರಿಗೆ ವಿಮಾ ಸೌಲಭ್ಯವನ್ನು ನೀಡುವ ಪ್ರಸ್ತಾಪ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯೋಜನೆಯನ್ನು ಯಾವ ರೀತಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದು? | ಸಮುದ್ರದಲ್ಲಿ ಮೀನುಗಾರಿಕೆ ಮಾಡುವ ಮೀನುಗಾರರಿಗೆ ವಿಮಾ ಸೌಲಭ್ಯವನ್ನು ನೀಡುವ ಯೋಜನೆ ಸರ್ಕಾರದ ಮುಂದಿರುವುದಿಲ್ಲ. ಆದರೂ ಸಮುದ್ರದಲ್ಲಿ ಮೀನುಗಾರಿಕೆ ನಡೆಸುವ ಯಾಂತ್ರೀಕೃತ ದೋಣಿಗಳಿಗೆ ಮೀನುಗಾರಿಕೆ ಪರವಾನಗಿ ನೀಡುವ ಮೊದಲು ಬೋಟಿಗೆ ವಿಮೆ ಮಾಡಬೇಕಿದ್ದು, ಇದರೊಂದಿಗೆ ಕಲಾಸಿಗಳ ವಿಮೆಯನ್ನು ಮಾಡಿಸಿಕೊಳ್ಳಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-69 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಟಿ ಶ್ರೀನಿವಾಸ್ ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1629 ರ **ಅನುಬಂಧ-1**

**ಪ್ರಸ್ತುತ 2025-26 ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:**

1. **ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು:**

ಹಿಂದಿನ ಸಾಲಿನ ವರೆಗೆ ಈ ಕೆಳಕಂಡ 5 ಯೋಜನೆಗಳನ್ನು ಪ್ರತ್ಯೇಕ ಲೆಕ್ಕ ಶೀರ್ಷಿಕೆಗಳಡಿ ಅನುಷ್ಠಾನಗೊಳಿಸಲಾಗುತ್ತಿದ್ದು, 2023-24ನೇ ಸಾಲಿನಿಂದ ಒಂದೇ ಲೆಕ್ಕ ಶೀರ್ಷಿಕೆಯಡಿ (2405-00-101-0-03) ವಿಲೀನಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 2025-26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯಧನ ನೀಡುವ ಯೋಜನೆಯನ್ನೂ ಸಹ ಇದೇ ಲೆಕ್ಕ ಶೀರ್ಷಿಕೆಯಡಿ ಅನುಷ್ಠಾನಗೊಳಿಸಲಾಗುತ್ತಿದೆ.

1.1 **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ:** ಈ ಯೋಜನೆಯಡಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

a) **ಮೀನುಮರಿಗಳ ಖರೀದಿಗೆ ಸಹಾಯಧನ:** ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನು ಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/-ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನುಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇ ರ್ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ. 50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

b) **ಸೀಗಡಿ ಮತ್ತು ಹಿನ್ನೀರು ಮೀನು ಕೃಷಿ ಪ್ರೋತ್ಸಾಹ** : ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸೀಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ ರೂ. 1 ಲಕ್ಷ ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು.

c) **ಕೆರೆ/ಜಲಾಶಯದ ಅಂಚಿನಲ್ಲಿ ಮೀನು ಕೊಳ ನಿರ್ಮಾಣಕ್ಕೆ ಸಹಾಯ:** ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್ ಜಲ ವಿಸ್ತೀರ್ಣಕ್ಕೆ ರೂ.2.50 ಲಕ್ಷ ಸಹಾಯಧನ ನೀಡಲಾಗುವುದು.

d) **ಮೀನು ಉತ್ಪಾದನಾ/ಪಾಲನಾ ಕೇಂದ್ರಗಳ ಉನ್ನತೀಕರಣ:** ಮೀನಿನ ಮರಿ ಉತ್ಪಾದನೆಯನ್ನು ಹೆಚ್ಚಿಸುವ ಒಂದು ತಂತ್ರವೆಂದರೆ ಮೀನು ಉತ್ಪಾದನಾ /ಪಾಲನಾ ಕೇಂದ್ರಗಳಲ್ಲಿ ಸೌಲಭ್ಯಗಳ ಉನ್ನತೀಕರಣ (ಆಧುನೀಕರಣ) ಮೂಲಕ ಅಸ್ತಿತ್ವದಲ್ಲಿರುವ ಮೀನು ಸಾಕಣೆ ಸಾಮರ್ಥ್ಯದ ಬಳಕೆಯನ್ನು ಹೆಚ್ಚಿಸುವುದು. ಈ ನಿಟ್ಟಿನಲ್ಲಿ ಮೀನುಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕೈಗೊಳ್ಳಲಾಗುತ್ತಿದೆ.

1.2 **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ:**

a) ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ಟು ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b) ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/-ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗುವುದು.

## 1.3 ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ:

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನುಮರಿಗಳನ್ನು ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

## 1.4 ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ:

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

## 1.5 ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು:

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ. ಗಳ ವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19 ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ. 2023-24 ನೇ ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನು ರೂ.50,000/- ಗಳಿಂದ ರೂ.3,00,000/-ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

## 1.6 ಪರಿಶಿಷ್ಟ ಜಾತಿ ಉಪ ಯೋಜನೆ/ ಗಿರಿಜನ ಉಪ ಯೋಜನೆ:

2025-26 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 71 ರಂತೆ ಈ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆಯ್ದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50 ರಷ್ಟು ಅಥವಾ ಗರಿಷ್ಠ ರೂ.3 ಲಕ್ಷ ಆರ್ಥಿಕ ನೆರವು ನೀಡಲಾಗುವುದು.

## 2. PMMSY-ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ (ಕೇಂದ್ರ ಪುರಸ್ಕೃತ ಯೋಜನೆ):

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನು ಮಾರುಕಟ್ಟೆಗಳು ಮತ್ತು ಮಾರಾಟ ಮೂಲಸೌಕರ್ಯಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು

ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

3. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು:**

**ಮರಣ ಪ್ರಕರಣ**: ಮೀನುಗಾರಿಕೆಯಲ್ಲಿ ಮತ್ತು ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಮರಣ ಹೊಂದಿದ ಪ್ರಕರಣಗಳಿಗೆ ಹಾಗೂ ಮೀನುಗಾರಿಕೆಯಲ್ಲಿ ತೊಡಗಿದಾಗ ಅನಾರೋಗ್ಯದಿಂದ ಮೃತಪಟ್ಟ ಪ್ರಕರಣಗಳಿಗೆ ರೂ.10.00 ಲಕ್ಷ ಪರಿಹಾರ ನೀಡಲಾಗುವುದು.

**ಅಂಗವಿಕಲತೆ**: ಮೀನುಗಾರಿಕೆಯಲ್ಲಿ ತೊಡಗಿರುವಾಗ ಮತ್ತು ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ ಮೀನುಗಾರರು ಶಾಶ್ವತ ಅಂಗವಿಕಲರಾದಲ್ಲಿ ರೂ.4.00 ಲಕ್ಷ ಹಾಗೂ ಭಾಗಶ: ಅಂಗವಿಕಲರಾದಲ್ಲಿ ರೂ.2.00 ಲಕ್ಷ ಪರಿಹಾರ ನೀಡಲಾಗುವುದು.

**ವೈದ್ಯಕೀಯ ವೆಚ್ಚ**: ಮೀನುಗಾರಿಕೆಯಲ್ಲಿ ಅಥವಾ ಮೀನುಗಾರಿಕೆ ಸಂಬಂಧಿತ ಚಟುವಟಿಕೆಗಳಲ್ಲಿ ತೊಡಗಿರುವಾಗ ಅಪಘಾತ ಸಂಭವಿಸಿ ವೈದ್ಯಕೀಯ ಶುಶ್ರೂಷೆಗಾಗಿ ಮಾಡಿತ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಠ ರೂ.3.00 ಲಕ್ಷಗಳ ಮಿತಿಗೊಳಪಟ್ಟು ಪರಿಹಾರ ನೀಡಲಾಗುವುದು.

**ದೋಣಿ/ಬಲೆ/ಮೀನುಗಾರಿಕೆ ಸಲಕರಣೆಗಳ ಸ್ವತ್ತು ಹಾನಿ**: ಪ್ರಾಕೃತಿಕ ವಿಕೋಪದಿಂದಾದ ನಾಡದೋಣಿ/ಮೋಟರೀಕೃತ/ಯಾಂತ್ರೀಕೃತ ದೋಣಿಗಳ ಹಾನಿಗೆ ಹಾಗೂ ಬಲೆ ಇನ್ನಿತರ ಸ್ವತ್ತು ಹಾನಿಗೆ ಅವುಗಳ ಖರೀದಿ/ದುರಸ್ತಿ ಮೌಲ್ಯದ ಶೇ.50 ರಷ್ಟು ಮೌಲ್ಯವನ್ನು ಅಥವಾ ಗರಿಷ್ಠ ರೂ.10.00 ಲಕ್ಷಗಳಿಗೆ ಒಳಪಟ್ಟು ಪರಿಹಾರವಾಗಿ ನೀಡಲಾಗುವುದು.

4. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಕರಾವಳಿಯ 3 ಜಿಲ್ಲೆಗಳಲ್ಲಿನ ಮೋಟರೀಕೃತ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ ಹಾಗೂ ರೂ.35/- ರಿಯಾಯತಿ ದರದಲ್ಲಿ ಕೈಗಾರಿಕಾ ಸೀಮೆಎಣ್ಣೆಯನ್ನು ನಿರಂತರವಾಗಿ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ.

5. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ:**

2021-22 ನೇ ಸಾಲಿನಿಂದ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1.5 ಲಕ್ಷ ಕಿಲೋ ಲೀಟರ್‌ಗಳಷ್ಟು ಡೀಸೇಲ್ ಅನ್ನು ಡೇಲೀವರಿ ಪಾಯಿಂಟ್‌ನಲ್ಲಿಯೇ ರಾಜಯ ಮಾರಾಟ ಕರರಹಿತ ದರದಲ್ಲಿ ವಿತರಿಸಲಾಗುತ್ತಿದೆ. ಪ್ರಸ್ತುತ 2023-24 ನೇ ಸಾಲಿನಲ್ಲಿ ಸದರಿ ದೋಣಿಗಳಿಗೆ ನೀಡುತ್ತಿರುವ ಡೀಸೆಲ್ ಮಿತಿಯನ್ನು 1.5 ಲಕ್ಷ ಕಿಲೋ ಲೀಟರ್‌ಗೆ 2.00 ಲಕ್ಷ ಕಿಲೋ ಲೀಟರ್‌ಗೆ ಹೆಚ್ಚಿಸಲಾಗಿದೆ.

6. **ಮತ್ಸ್ಯಾಶ್ರಯ ಯೋಜನೆ:**

ರಾಜ್ಯ ಸರ್ಕಾರವು 2006-07ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ"ಯನ್ನು ಪ್ರಾರಂಭಿಸಿದ್ದು, ಇದರ ಅಡಿಯಲ್ಲಿ ವಸತಿ ರಹಿತ ಮೀನುಗಾರರು ಅಥವಾ ವಾಸಿಸಲು ಯೋಗ್ಯ ಮನೆ ಇಲ್ಲದ ಮೀನುಗಾರರಿಗೆ ಪ್ರತಿ ವರ್ಷ ಅನುದಾನ ಲಭ್ಯತೆಯ ಆಧಾರದ ಮೇಲೆ ಮನೆಗಳನ್ನು ಹಂಚಿಕೆ ಮಾಡಲಾಗುತ್ತದೆ.

2024-25ನೇ ಸಾಲಿನಲ್ಲಿ 10,000 ವಸತಿ ರಹಿತ ಮೀನುಗಾರರಿಗೆ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುವುದು". ಎಂದು ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿತ್ತು. ಪ್ರಸ್ತುತ 8914 ಮನೆಗಳನ್ನು ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಲಾಗಿದೆ.

7. **ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ):**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ. 4500/- ಗಳನ್ನು ಮೀನುಗಾರಿಕೆ ನಿಷೇಧದ ಅವಧಿಯಲ್ಲಿ ಮೀನುಗಾರರಿಗೆ ನೀಡಲಾಗುತ್ತಿತ್ತು.

2024-25 ನೇ ಸಾಲಿನಿಂದ "ಮತ್ಸ್ಯ ಆಶಾಕಿರಣ ಯೋಜನೆ" ಯಡಿ ಮೀನುಗಾರಿಕೆ ನಿಷೇಧದ ಅವಧಿಯಲ್ಲಿ ಕರಾವಳಿಯ ಮೀನುಗಾರರಿಗೆ ನೀಡುತ್ತಿರುವ ಪರಿಹಾರ ಮೊತ್ತದ ರಾಜ್ಯದ ಪಾಲನ್ನು 1,500 ರೂ. ಗಳಿಂದ 3,000 ರೂ. ಗಳಿಗೆ ಹೆಚ್ಚಿಸಲಾಗಿದೆ." ಆದ್ದರಿಂದ ಪ್ರಸ್ತುತವಾಗಿ, ಫಲಾನುಭವಿಯ ಪಾಲು ರೂ 1500/-, ಕೇಂದ್ರ ಸರ್ಕಾರದ ಪಾಲು ರೂ.1500/-, ರಾಜ್ಯ ಸರ್ಕಾರದ ಪಾಲು ರೂ.3000/- ಸೇರಿಸಿ ಹೀಗೆ ಒಟ್ಟು ರೂ.6000/-ಗಳನ್ನು ಮೀನುಗಾರಿಕೆ ನಿಷೇಧದ ಅವಧಿಯಲ್ಲಿ ಮೀನುಗಾರರಿಗೆ ನೀಡಲಾಗುತ್ತಿದೆ.

**ಆ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 80,099 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.5,00,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1,00,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ಹೈದರಾಬಾದ್‌ನಲ್ಲಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗುತ್ತಿದೆ.

8. **ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ):**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಈ ಯೋಜನೆಯಡಿ ಬಂದರುಗಳು ಮತ್ತು ಬ್ರೇಕ್‌ವಾಟರ್‌ಗಳ ನಿರ್ಮಾಣವನ್ನು ಕೈಗೊಳ್ಳಲಾಗುತ್ತದೆ. ಹೆಜಮಾಡಿ ಕೋಡಿ ಮೀನುಗಾರಿಕಾ ಬಂದರಿನ ನಿರ್ಮಾಣ ಕಾಮಗಾರಿಯನ್ನು 2025-26 ನೇ ಸಾಲಿನಲ್ಲಿ ಮುಂದುವರಿಸಲಾಗುವುದು.

9. **ಫಲಾನುಭವಿಗಳಲ್ಲದ ಮೂಲಸೌಕರ್ಯ ಸಂಬಂಧಿತ ಕೆಲಸಗಳು- ಕೇಂದ್ರ ಪುರಸ್ಕೃತ ಯೋಜನೆ:**

ಈ ಯೋಜನೆಯಡಿ ಮಂಗಳೂರು ಮೀನುಗಾರಿಕೆ ಬಂದರು, ಮಲ್ಪೆ ಮೀನುಗಾರಿಕೆ ಬಂದರು ಹಾಗೂ ಗಂಗೊಳ್ಳಿ ಮೀನುಗಾರಿಕೆ ಬಂದರುಗಳ ಆಧುನೀಕರಣ ಕಾಮಗಾರಿಯನ್ನು ಹಾಗೂ ಆಮದಳ್ಳಿ ಮೀನುಗಾರಿಕೆ ಬಂದರು ,ಬೇಲಿಕೇರಿ, ಹಾರವಾಡ ಮೀನುಗಾರಿಕೆ ಬಂದರು, ತದಡಿ ಮೀನುಗಾರಿಕೆ ಬಂದರುಗಳಲ್ಲಿ ಹೂಳೆತ್ತುವ ಕಾಮಗಾರಿಯನ್ನು 2025-26 ನೇ ಸಾಲಿನಲ್ಲಿ ಕೈಗೊಳ್ಳಲಾಗುವುದು.

**10. ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ:**

ಈ ಯೋಜನೆಯಡಿ ಮಂಗಳೂರು ಮೀನುಗಾರಿಕೆ ಬಂದರಿನ 3ನೇ ಹಂತದ ಅಭಿವೃದ್ಧಿ ಕಾಮಗಾರಿ ಮತ್ತು ಮರವಂತೆಯಲ್ಲಿ 2ನೇ ಹಂತದ ಅಲೆ ತಡೆಗೋಡೆ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

**11. ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ:**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ರ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನು ಮಾರುಕಟ್ಟೆಗಳ ನಿರ್ಮಾಣ, ಮೀನುಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು / ಮುಂದುವರಿಸಲು ಅನುದಾನ ಒದಗಿಸಲಾಗಿದೆ.

**12. "ವಿದ್ಯಾನಿಧಿ" ಯೋಜನೆ:**

ಕರ್ನಾಟಕ ರಾಜ್ಯದಲ್ಲಿ ಸುಮಾರು 10 ಲಕ್ಷ ಮೀನುಗಾರರಿದ್ದು, ಮೀನುಗಾರರು ಆರ್ಥಿಕವಾಗಿ ಹಿಂದುಳಿದವರಾಗಿರುತ್ತಾರೆ. ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಶಿಷ್ಯವೇತನ (Scholarship) ಯೋಜನೆ- "ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**13. ಮೀನುಗಾರಿಕೆ ಇಲಾಖೆಯ ಪ್ರಧಾನ ಕಾಮಗಾರಿಗಳು:**

ಈ ಲೆಕ್ಕ ಶೀರ್ಷಿಕೆಯಡಿ 2025-26 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 69 "ಮಂಗಳೂರಿನಲ್ಲಿರುವ ಮೀನುಗಾರಿಕೆ ಕಾಲೇಜಿಗೆ ಪ್ರಸ್ತುತ ನಿಗದಿಪಡಿಸಿರುವ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ದ್ವಿಗುಣಗೊಳಿಸಲಾಗುವುದು" ಎಂಬ ಯೋಜನೆಯನ್ನು ರೂ.5.00 ಕೋಟಿಗಳಲ್ಲಿ ಕೈಗೊಳ್ಳಲು ಹಾಗೂ ಕಂಡಿಕೆ 73 "ಪ್ರವಾಸಿಗರಿಗೆ ಶುಚಿ-ರುಚಿಯಾದ ಪೌಷ್ಟಿಕ ಮೀನು ಖಾದ್ಯಗಳನ್ನು ಒದಗಿಸಲು ಮೈಸೂರಿನಲ್ಲಿ ಹೈ-ಟೆಕ್ ಮತ್ಸ್ಯದರ್ಶಿನಿಯನ್ನು ಪ್ರಾರಂಭಿಸಲಾಗುವುದು" ಎಂಬ ಯೋಜನೆಯನ್ನು ಕೈಗೊಳ್ಳಲಾಗುವುದು.

## ಜಿಲ್ಲಾ ಪಂಚಾಯತ್ ಯೋಜನೆಗಳು:

**1. ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನುಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

**2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ:**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ.

ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನುಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನುಮಾರಾಟಕ್ಕೆ ಸಹಾಯ:**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯಧನವನ್ನು ಹಾಗೂ ದ್ವಿಚಕ್ರವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಘಟಕ ವೆಚ್ಚದ ಶೇ.25 ರಷ್ಟು ಹಾಗೂ ಗರಿಷ್ಠ ರೂ.30,000/- ಗಳ ಸಹಾಯಧನವನ್ನು ನೀಡಲಾಗುವುದು.

ತ್ರಿಚಕ್ರ ಟೆಂಪೋರಿಕ್ಷಾವನ್ನು ಖರೀದಿಸಲು ಘಟಕ ವೆಚ್ಚದ ಶೇ.25 ರಷ್ಟು ಹಾಗೂ ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ಟೆಂಪೋರಿಕ್ಷಾವನ್ನು ಖರೀದಿಸಲು ಘಟಕ ವೆಚ್ಚದ ಶೇ.25 ರಷ್ಟು ಹಾಗೂ ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಸಾಂಪ್ರದಾಯಿಕ ಮೀನುಗಾರಿಕೆ ದೋಣಿ ಹೊಂದಿರುವ (ಪಾತಿ) ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಖರೀದಿಸಲು ಘಟಕ ವೆಚ್ಚದ ಪ್ರತಿಶತ 50 ರಷ್ಟು ಹಾಗೂ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4. ಪ್ರದರ್ಶನ ಮತ್ತು ತರಬೇತಿ:**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನುಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಮೀನುಗಾರಿಕೆ ನಿರ್ದೇಶಕರು
ಕ್ಷ13